# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರು [ರಾಜಾಜಿನಗರ] ರವರ ಕಛೇರಿ, ಬಿ.ಬಿ.ಎಂ.ಪಿ.
ವಾಣಿಜ್ಯ ಸಂಕೀರ್ಣ, 2ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು10

ಸಂಖ್ಯೆ: ಸ.ಕಾ.ನಿ.ಅ/ರಾನ/ಪಿಆರ್/ 05 /21-22. ದಿನಾಂಕ: 17-07-2021

**ಸಭಾ ಸೂಚನಾ ಪತ್ರ:-**

**ವಿಷಯ:** ವಾರ್ಡ್ ನಂ. 100/ಬಸವೇಶ್ವರನಗರ ವಾರ್ಡ್ ಸಮಿತಿ ಸಭೆಗೆ ಹಾಜರಾಗುವ ಬಗ್ಗೆ

**************

ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ. ರವರ ಆದೇಶದ ರೀತ್ಯಾ ವಾರ್ಡ್ ನಂ. 100/ಬಸವೇಶ್ವರನಗರ ವಾರ್ಡ್ ಸಮಿತಿ ಸಭೆಯನ್ನು ನೋಡಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ದಿನಾಂಕ: **20-07-2021** ರಂದು ಬೆಳಗ್ಗೆ **11.00** ಗಂಟೆಗೆ ವಾರ್ಡ್ ಸಮಿತಿ ಸಭೆಯು ಬಿ.ಬಿ.ಎಂ.ಪಿ. **ವಾರ್ಡ್ ಕಛೇರಿ, ಬಸವೇಶ್ವರನಗರ** ಇಲ್ಲಿ ಜರುಗಲಿದ್ದು, ತಾವುಗಳು ಈ ಸಭೆಗೆ ತಪ್ಪದೇ ಹಾಜರಾಗಲು ಕೋರಲಾಗಿದೆ.

**ಸಭೆಯಲ್ಲಿ ಚರ್ಚಿಸುವ ವಿಷಯಗಳು:-**

1. ಕೋವಿಡ್-19ರ ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ
2. ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ
3. ವಾರ್ಡ್‌ಗಳಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.
4. ವಾರ್ಡ್‌ನ ವಿವಿಧ ಅಭಿವೃದ್ಧಿ ಕಾರ್ಯಗಳ ಬಗ್ಗೆ.
5. ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ.
6. ಬೀದಿ ದೀಪಗಳ ನಿರ್ವಹಣೆ ಬಗ್ಗೆ.
7. ವಿದ್ಯುತ್ ಸರಬರಾಜು [ಬೆಸ್ಕಾಂ] ಗೆ ಸಂಬಂಧಿಸಿದ ವಿಷಯದ ಬಗ್ಗೆ.
8. S.W.D ಕಾಮಗಾರಿ ಪ್ರಗತಿಯಲ್ಲಿರುವ ಹಿನ್ನಲೆಯಲ್ಲಿ ಮಳೆ ನೀರಿನಿಂದ ಮುಳುಗಡೆಯಾಗುವ ಪ್ರದೇಶಗಳ ಸಮಸ್ಯೆ ಬಗ್ಗೆ.

17/7/2021

ನೋಡಲ್ ಅಧಿಕಾರಿಗಳು
ವಾರ್ಡ್ ನಂ. 100

**ಪ್ರತಿಯನ್ನು:**

1. ಮಾನ್ಯ ಜಂಟಿ ಆಯುಕ್ತರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು , ರಾಜಾಜಿನಗರ ವಿಭಾಗ/ಯೋಜನೆ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.

ಪು.ತಿ.ನೋ.

Scanned with CamScanner

5. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಘನತ್ಯಾಜ್ಯ] ರಾಜಾಜಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬಿ.ಡಬ್ಲ್ಯೂ.ಎಸ್.ಎಸ್.ಬಿ.] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಬೀದಿ ದೀಪಗಳ ನಿರ್ವಹಣೆ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
8. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬೆಸ್ಕಾಂ] ಉಪವಿಭಾಗ ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
9. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ರಸ್ತೆ ಮತ್ತು ಮೂಲ ಭೂತ ಸೌಕರ್ಯ.] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [S.W.D] ರವರ ಮಾಹಿತಿಗಾಗಿ ಸಲ್ಲಿಸಿದೆ.
10. ಕಾಂಟ್ರಕ್ಟ್ ಟ್ರೇಸಿಂಗ್, ನೋಡಲ್ ಅಧಿಕಾರಿ
11. ಕಲ್ಯಾಣ ಅಧಿಕಾರಿ, ಪಶ್ಚಿಮ ವಲಯ, ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
12. ಹೋಮ್ ಕ್ವಾರಂಟೈನ್, ಸ್ಕ್ವಾಡ್ ನೋಡಲ್ ಅಧಿಕಾರಿ, ರಾಜಾಜಿನಗರ ವಿಭಾಗ,
13. ಕಲ್ಯಾಣಾಧಿಕಾರಿ, ಪಶ್ಚಿಮ ವಲಯ
14. ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಪಶ್ಚಿಮ ವಲಯ
15. ಠಾಣಾಧಿಕಾರಿಗಳು, ಬಸವೇಶ್ವರನಗರ
16. ಸಂಚಾರಿ ಪೋಲಿಸ್ ಠಾಣೆ, ವಿಜಯನಗರ
17. ಸಹ ಕಂದಾಯ ಅಧಿಕಾರಿ [ರಾಜಾಜಿನಗರ] ವಲಯ ರವರ ಮಾಹಿತಿಗಾಗಿ ಸಲ್ಲಿಸಿದೆ.
18. ಕಚೇರಿ ಕಡತಕ್ಕೆ.

Scanned with CamScanner

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 100, ಬಸವೇಶ್ವರನಗರ, ಬೆಂಗಳೂರು**

---

ಸಂಖ್ಯೆ:ಸ.ಅ/ವಾ–100/ಪಿಆರ್/ 05 / 2021–22 ದಿನಾಂಕ: 23-07-2021

**ವಾರ್ಡ್ ಸಮಿತಿ ಸಭೆಯ ನಡವಳಿಗಳು:–**

**ವಿಷಯ:** ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ. ರವರ ಆದೇಶ ಸಂಖ್ಯೆ: ಬಿ12[5]ಪಿಆರ್/35/2020–21. ದಿನಾಂಕ: 21.09.2020ರ ಆದೇಶದಂತೆ ದಿನಾಂಕ: 20–07–2021 ರಂದು ವಾರ್ಡ್ ನಂ. 100 ಬಸವೇಶ್ವರನಗರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು:

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು:–**

1. ಶ್ರೀ ದೃವರಾಜ್, ನೋಡಲ್ ಅಧಿಕಾರಿಗಳು, ಎಡಿ.ಟಿ.ಪಿ. ವಾರ್ಡ್ ನಂ. 100
2. ಶ್ರೀ ಸೋಮಶೇಖರ್, ಸಹಾಯಕ ಅಭಿಯಂತರರು, ವಾರ್ಡ್ ನಂ. 100
3. ಶ್ರೀಮತಿ ಸಂಧ್ಯಾ.ಕೆ.ಪಿ. ಹಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ ರಘು, ಕಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ ಮಂಜುನಾಥ್, ಸಂಚಾರಿ ಪೊಲೀಸ್ ಅಧಿಕಾರಿಗಳು
6. ಶ್ರೀ ಸಂಗಪ್ಪ, ಪೋಲಿಸ್ ಠಾಣಾ ಅಧಿಕಾರಿ,
7. ಶ್ರೀ ಮಾರುತಿ, ಅರಣ್ಯಾಧಿಕಾರಿಗಳು
8. ಶ್ರೀ ಮಲ್ಲೇಶ್, ಕಂದಾಯ ಅಧಿಕಾರಿ
9. ಶ್ರೀ ಮೋಹನ್ ಕುಮಾರ್, ಬಿ.ಡ್ಬ್ಲ್ಯೂ.ಎಸ್.ಎಸ್.ಬಿ. ಅಧಿಕಾರಿ.

1. ವಾರ್ಡಿನ ಸದಸ್ಯರು ಮಾತನಾಡಿ, ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗದಂತೆ ತುರ್ತಾಗಿ ರಸ್ತೆ ಗುಂಡಿಗಳನ್ನು ಮುಚ್ಚಲು ಕೋರಿದರು.

   ನೋಡಲ್ ಅಧಿಕಾರಿಗಳು ತ್ವರಿತ ಗತಿಯಲ್ಲಿ ಸಂಪೂರ್ಣವಾಗಿ ವಾರ್ಡಿನ ರಸ್ತೆ ಗುಂಡಿಗಳನ್ನು ಮುಚ್ಚಲು ಶ್ರೀ ಸೋಮಶೇಖರ್, ಸಹಾಯಕ ಅಭಿಯಂತರರು ರವರಿಗೆ ಸೂಚಿಸಿದರು.

2. ಸದಸ್ಯರು ವಾಹನ ನಿಲುಗಡೆಯನ್ನು ತೆರವುಗೊಳಿಸುವ ಬಗ್ಗೆ ಪ್ರಸ್ತಾಪಿಸಿದರು

   ನೋಡಲ್ ಅಧಿಕಾರಿಗಳು ವಾರ್ಡಿನ ಹಲವು ರಸ್ತೆ ಬದಿಗಳಲ್ಲಿ ಹಳೇಯ ಅನುಪಯುಕ್ತ ವಾಹನಗಳನ್ನು ನಿಲುಗಡೆ ಮಾಡಿರುವುದನ್ನು ಖುದ್ದಾಗಿ ಪರಿಶೀಲಿಸಿರುತ್ತೇನೆ. ಸದರಿ ವಾಹನಗಳನ್ನು ತೆರವುಗೊಳಿಸುವಂತೆ ಹಾಜರಿದ್ದ ಸಂಚಾರಿ ಪೋಲಿಸ್ ಅಧಿಕಾರಿಗಳಿಗೆ ಸೂಚಿಸಿದರು.

3. ಸದಸ್ಯರು ಬ್ಲಾಕ್ ಸ್ಪಾಟ್‌ಗಳನ್ನು ತೆರವುಗೊಳಿಸುವಂತೆ ಪ್ರಸ್ತಾಪಿಸಿದರು.

   ನೋಡಲ್ ಅಧಿಕಾರಿಗಳು ಮಾತನಾಡಿ ವಾರ್ಡಿನ ಕೆಲವು ರಸ್ತೆಗಳನ್ನು ಖುದ್ದಾಗಿ ಪರಿಶೀಲಿಸಿದ್ದು, ಕಸ ವಿಲೇವಾರಿಯನ್ನು ಸೂಕ್ತವಾಗಿ ನಿರ್ವಹಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಹಾಗೂ ಮಾರ್ಷಲ್ ರವರ ಸಹಾಯದಿಂದ ಕಸ ಎಸೆಯುವವರ ವಿರುದ್ಧ ಕ್ರಮ ಕೈಗೊಂಡು ಬ್ಲಾಕ್ ಸ್ಪಾಟ್‌ಗಳನ್ನು ವಾರ್ಡಿನಲ್ಲಿ ಸಂಪೂರ್ಣವಾಗಿ ತೆರವುಗೊಳಿಸುವಂತೆ ಸೂಚಿಸಿದರು. ಕೆಲವು ಪೌರಕಾರ್ಮಿಕರು ಗ್ಲೌಸ್ ಮತ್ತು ಮಾಸ್ಕ್‌ಗಳನ್ನು ಧರಿಸದೆ ಇರುವ ಬಗ್ಗೆ ಅಸಮಧಾನ ವ್ಯಕ್ತ ಪಡಿಸಿ, ಕಾರ್ಮಿಕರ ಆರೋಗ್ಯದ ಹಿತದೃಷ್ಟಿಯಿಂದ ಕಡ್ಡಾಯವಾಗಿ ಧರಿಸುವಂತೆ ನಿರ್ದೇಶನ ನೀಡಲು ಅಧಿಕಾರಿಗಳಿಗೆ ಸೂಚಿಸಿದರು.

4. ಸದಸ್ಯರು ನೇತಾಜಿ ಆಟದ ಮೈಧಾನದಲ್ಲಿ ಹಾಲಿ ಇರುವ ಕಸ ವಿಂಗಡಣೆ ಘಟಕವನ್ನು ಸ್ಥಳಾಂತರಿಸುವ ಬಗ್ಗೆ ಪ್ರಸ್ತಾಪಿಸಿದರು.

Scanned with CamScanner

ಸಂಬಂಧಿಸಿದ ಅಧಿಕಾರಿಯಾದ ಶ್ರೀಮತಿ ಸಂಧ್ಯಾ ರವರು ಮಾತನಾಡಿ ಕಸ ವಿಂಗಡಣೆ ಘಟಕವನ್ನು ಸ್ಥಳಾಂತರಿಸುವ ಬಗ್ಗೆ ಮೇಲಾಧಿಕಾರಿಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸಿ, ಅನುಮೋದನೆ ಪಡೆದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

ನೋಡಲ್ ಅಧಿಕಾರಿಗಳು ಸದರಿ ವಿಷಯವನ್ನು ಗಂಭೀರವಾಗಿ ಪರಿಗಣಿಸಲು ಸಂಬಂಧಿಸಿದ ಅಧಿಕಾರಿಯಾದ ಶ್ರೀಮತಿ ಸಂಧ್ಯಾ ರವರಿಗೆ ಸೂಚಿಸಿದರು.

5. ಸದಸ್ಯರು ಎಸ್.ಡ್ಬ್ಲ್ಯೂ.ಡಿ. ಕಾಮಗಾರಿಯನ್ನು ತ್ವರಿತಗತಿಯಲ್ಲಿ ಕೈಗೊಂಡು ಪೂರ್ಣಗೊಳಿಸಲು ಪ್ರಸ್ತಾಪಿಸಿದರು.

ಇಲ್ಲದಿದ್ದಲ್ಲಿ ಪ್ರತಿ ಮಳೆಯಲ್ಲು 8ನೇ ಮುಖ್ಯ ರಸ್ತೆಯಲ್ಲಿ ಫ್ಲಡ್ಡಿಂಗ್ ಆಗುವ ಭೀತಿಯಿಂದ ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಪ್ರಸ್ತಾಪಿಸಿದರು. ಸದರಿ ವಿಷಯವನ್ನು ನೋಡಲ್ ಅಧಿಕಾರಿಗಳು ಎಸ್.ಡ್ಬ್ಲ್ಯೂ.ಡಿ.ಅಧಿಕಾರಿಗಳೊಂದಿಗೆ ಚರ್ಚಿಸಿ ಕಾಮಗಾರಿಯನ್ನು ಪೂರ್ಣಗೊಳಿಸುವ ಬಗ್ಗೆ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

6. ಸದಸ್ಯರು ವಿಶ್ವೇಶ್ವರಯ್ಯ ಪಾರ್ಕ್ ನೇತಾಜಿ ಆಟದ ಮೈಧಾನವನ್ನು ಅಭಿವೃದ್ಧಿ ಪಡಿಸುವ ಬಗ್ಗೆ ಹಾಗೂ ವಾರ್ಡಿನಲ್ಲಿ ಒಂದು ಪ್ರಾಥಮಿಕ ಕೇಂದ್ರವನ್ನು ತೆರೆಯುವ ಬಗ್ಗೆ ಪ್ರಸ್ತಾಪಿಸಿದರು.

ನೋಡಲ್ ಅಧಿಕಾರಿಗಳು ಸದರಿ ಅಭಿವೃದ್ಧಿ ಕಾಮಗಾರಿಯ ಬಗ್ಗೆ ಮೇಲಾಧಿಕಾರಿಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸಂಬಂಧಿಸಿದ ಅಧಿಕಾರಿ ಶ್ರೀಮತಿ ವಿಜಯಲಕ್ಷ್ಮಿ ರವರಿಗೆ ಸೂಚಿಸಿದರು.

7. ಸದಸ್ಯರು ಬಿ.ಡ್ಬ್ಲ್ಯೂ.ಎಸ್.ಎಸ್.ಬಿ. ವತಿಯಿಂದ ಮಾಡುವ ಮ್ಯಾನ್ ಹೋಲ್ ಗಳಿಂದ ಹೂಳು ತೆಗೆದು ಇದನ್ನು ತೆರವುಗೊಳಿಸದೆ ಇರುವ ಬಗ್ಗೆ ಅಸಮಧಾನ ವ್ಯಕ್ತ ಪಡಿಸಿದರು. ಹಾಗೂ ರಸ್ತೆಗಳಲ್ಲಿ ಪೈಪ್ ಅಳವಡಿಸಲು ಬಿ.ಡ್ಬ್ಲ್ಯೂ.ಎಸ್.ಎಸ್.ಬಿ. ರವರು ರಸ್ತೆ ಅಗೆದು ಅದನ್ನು ಮುಚ್ಚದೆ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗುತ್ತಿರುವುದಾಗಿ ಪ್ರಸ್ತಾಪಿಸಿದರು.

8. ನೋಡಲ್ ಅಧಿಕಾರಿಗಳು ಮಾತನಾಡಿ ಬಿ.ಡ್ಬ್ಲ್ಯೂ.ಎಸ್.ಎಸ್.ಬಿ.ರವರು ಮ್ಯಾನ್ ಹೋಲ್‌ಗಳಿಂದ ಹೂಳನ್ನು ತೆಗೆದು ಹಾಗೆ ಬಿಡುವುದರಿಂದ ಬ್ಲಾಕ್ ಸ್ಪಾಟ್‌ಗಳು ಹೆಚ್ಚಾಗುವ ಸಂಭವ ಇರುವ ಬಗ್ಗೆ ತಿಳಿಸಿದರು. ಸ್ಥಳದಲ್ಲಿ ಹಾಜರಿದ್ದ ಬಿ.ಡ್ಬ್ಲ್ಯೂ.ಎಸ್.ಎಸ್.ಬಿ. ಅಧಿಕಾರಿಗಳಿಗೆ ಆಗಿಂದಾಗೆ ತೆರವುಗೊಳಿಸಲು ಸೂಚಿಸಿದರು ಹಾಗೂ ಮ್ಯಾನ್ ಹೋಲ್ ಕವರ್ ರಸ್ತೆಗಿಂತ ಎತ್ತರದಲ್ಲಿದ್ದು, ವಾಹನ ಸಂಚಾರಕ್ಕೆ ಅಡ್ಡಿ ಉಂಟಾಗುವುದರಿಂದ ಅದನ್ನು ಪರಿಶೀಲಿಸುವಂತೆ ಸೂಚಿಸಿದರು.

ಎಲ್ಲಾ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ತಿಳಿಸುವ ದೂರುಗಳನ್ನು ಸರಿಪಡಿಸಿ, ಮುಂದಿನ ಸಭೆಯಲ್ಲಿ ವರದಿಯನ್ನು ನೀಡುವಂತೆ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಸಹಿ) 23/07/2021

ನೋಡಲ್ ಅಧಿಕಾರಿಗಳು,
ವಾರ್ಡ್ ನಂ. 100/ಬಸವೇಶ್ವರನಗರ.

Scanned with CamScanner